**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ. 471/2016**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಸಿ ಎನ್ ಯರ್ರಿಸ್ವಾಮಿ | ಸಿ.ಡಬ್ಲ್ಯೂ-04 |
| ತಂದೆ ಹೆಸರು | : | ನಾಗರೆಡ್ಡಿ | ಪಿ.ಡಬ್ಲ್ಯೂ-05 |
| ವಯಸ್ಸು | : | 44 ವರ್ಷ | |
| ಉದ್ಯೋಗ | : | ಕಂಟ್ರಾಕ್ಟ್ ಕೆಲಸ | |
| ವಾಸಸ್ಥಳ | : | ಚಿತ್ರನಾಯಕನಹಟ್ಟಿ | ದಿಃ 05-02-2026. |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಆರೋಪಿ ನನಗೆ ಗೊತ್ತು .

ಆರೋಪಿ ಮತ್ತು ನನ್ನ ನಡುವೆ ಯಾವುದೇ ವ್ಯವಹಾರ ಇರಲಿಲ್ಲ. ನಾನು ಮೇಸ್ತ್ರಿ ಕೆಲಸ ಮಾಡುತ್ತಿದ್ದರಿಂದ ನನ್ನ ಬಟ್ಟೆ ಬ್ಯಾಗು, ಎನ್ ಎಸ್ ಸಿ ಬಾಂಡ್ ಹಾಗೂ ಪುಸ್ತಕವನ್ನು ಆರೋಪಿಯ ಮನೆಯಲ್ಲಿ ಇಟ್ಟು ಹೋಗುತ್ತಿದ್ದೆ. ಪೊಲೀಸರು ಆರೋಪಿಯ ಮನೆಯಲ್ಲಿದ್ದ ನನ್ನ ಬಾಂಡ್ ಗಳನ್ನು ತೆಗೆದುಕೊಂಡು ಹೋಗಿದ್ದು ನನಗೆ ತಿಳಿಸಿದ್ದರಿಂದ ನಾನು ನ್ಯಾಯಾಲಯದ ಆದೇಶದ ಮೇರೆಗೆ ಪೊಲೀಸ್ ಠಾಣೆಯಲ್ಲಿ ಎನ್ ಎಸ್ ಸಿ ಬಾಂಡ್ ಗಳನ್ನು ನನ್ನ ವಶಕ್ಕೆ ಪಡೆದಿರುತ್ತೇನೆ. ನಾನು ಪೊಲೀಸರಿಗೆ ಹೇಳಿಕೆಗಳನ್ನು ನೀಡಿರುವುದಿಲ್ಲ

**( ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**

2015 ನೇ ಸಾಲಿನಲ್ಲಿ ಆರೋಪಿ ಯಿಂದ 15,000/- ಹಣವನ್ನು ಶೇ.4 ರ ಬಡ್ಡಿ ದರದಂತೆ ಪಡೆದಿದ್ದೆ ಎಂದರೆ ಸರಿಯಲ್ಲ. ಸದರಿ ಸಾಲದ ಭದ್ರತೆಗಾಗಿ 9 ಎನ್ ಎಸ್ ಸಿ ಬಾಂಡ್ ಗಳನ್ನು ಆರೋಪಿಗೆ ನೀಡಿದ್ದೆ ಎಂದರೆ ಸರಿಯಲ್ಲ. ಆರೋಪಿಯು ಶೇಃ4 ದರದಂತೆ ಬಡ್ಡಿ ವ್ಯವಹಾರ ಮಾಡುತ್ತಿದ್ದರಿಂದ ಪೊಲೀಸರು ಆರೋಪಿಯ ಮನೆಯ ಮೇಲೆ ದಾಳಿ ನಡೆಸಿ ಬಾಂಡ್ ಗಳನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ನಿಪಿ.11 ರಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಎಸ್ ಡಿ ಹೆಚ್., ಆರೋಪಿ ಪರ ವಕೀಲರಿಂದಃ**

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ